ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2014–15 : ಜನವರಿ 26, 2015

## ಸುಪ್ರಸಿದ್ಧ ವ್ಯಂಗ್ಯಚಿತ್ರಗಾರ ಆರ್. ಕೆ. ಲಕ್ಷ್ಮಣ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

ಬೆಂಗಳೂರು, ಜನವರಿ 26 :

ಸುಪ್ರಸಿದ್ಧ ವ್ಯಂಗ್ಯಚಿತ್ರಗಾರ ಶ್ರೀ ರಾಶಿಪುರಂ ಕೃಷ್ಣಸ್ವಾಮಿ ಲಕ್ಷ್ಮಣ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಅರಮನೆಗಳ ನಗರಿ ಮೈಸೂರಿನಲ್ಲಿ ಜನಿಸಿ, ಅಲ್ಲೇ ವ್ಯಾಸಂಗ ಮಾಡಿದ ಶ್ರೀ ಆರ್. ಕೆ. ಲಕ್ಷ್ಮಣ್ ಅವರು ವ್ಯಂಗ್ಯಚಿತ್ರ ಲೋಕದಲ್ಲಿ ವಿಶೇಷ ಛಾಪು ಮೂಡಿಸಿ, ವಿಶ್ವ ವಿಖ್ಯಾತಿ ಗಳಿಸಿದ್ದಾರೆ. ಅಷ್ಟೇ ಅಲ್ಲ ! ಇಡೀ ರಾಷ್ಟ್ರಕ್ಕೇ ಹೆಮ್ಮೆ ಹಾಗೂ ಗೌರವವನ್ನು ತಂದಿದ್ದಾರೆ.

ಕನ್ನಡದ ಹಾಸ್ಯ ಪತ್ರಿಕೆ ಕೊರವಂಜಿ, ಮುಂಬೈನ ಫ್ರೀ ಪ್ರೆಸ್ ಜರ್ನಲ್‌ನ ನಂತರ ದಿ ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಗಳಲ್ಲಿ ಐದು ದಶಕಗಳಿಗೂ ಹೆಚ್ಚು ಕಾಲ ರೇಖಾಚಿತ್ರ ಹಾಗೂ ವ್ಯಂಗ್ಯ ಚಿತ್ರಗಳನ್ನು ರಚಿಸಿದ ಶ್ರೀ ಲಕ್ಷ್ಮಣ್ ಅವರು ವ್ಯಂಗ್ಯಚಿತ್ರಕಾರನಾಗಿ ಸುದೀರ್ಘ ಕಾಲ ಸೇವೆ ಸಲ್ಲಿಸಿಯೂ ವಿಶ್ವ ದಾಖಲೆ ಸ್ಥಾಪಿಸಿದ್ದಾರೆ. ದಿ ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯಲ್ಲಿನ *ಯು ಸೆಡ್ ಇಟ್* ಅಂಕಣದಲ್ಲಿ ಶ್ರೀಸಾಮಾನ್ಯನ ಚಿತ್ರಿಸಿ ಪ್ರತಿದಿನವೂ ರಾಷ್ಟ್ರದಲ್ಲಿನ ಪ್ರತಿ ಪ್ರಮುಖ ಬೆಳವಣಿಗೆಯ ಬಗ್ಗೆಯೂ ವ್ಯಂಗ್ಯಚಿತ್ರಗಳ ಮೂಲಕ ವಾರೆ ನೋಟ ಬೀರಿ ಹಾಸ್ಯವನ್ನು ಚಿಮ್ಮಿಸುತ್ತಿದ್ದ ಅಥವಾ ವಿಡಂಬನೆಯನ್ನು ಮಾಡುತ್ತಿದ್ದ ಶ್ರೀ ಲಕ್ಷ್ಮಣ್ ಅವರು ದೇಶದ ಉದ್ದಗಲಕ್ಕೂ ಬೃಹತ್ ಅಭಿಮಾನಿ ಬಳಗವನ್ನೇ ಬೆಳೆಸಿಕೊಂಡಿದ್ದರು. ಶ್ರೀ ಆರ್. ಕೆ. ಲಕ್ಷ್ಮಣ್ ಅವರ ನಿಧನದಿಂದ ವ್ಯಂಗ್ಯಚಿತ್ರ ಜಗತ್ತಿನ ಸಾರ್ವಭೌಮ ಕಣ್ಮರೆಯಾದಂತಾಗಿದೆ ಎಂದು ಶ್ರೀ ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಶ್ರೀ ಲಕ್ಷ್ಮಣ್ ಅವರ ಆತ್ಮಕ್ಕೆ ಶಾಂತಿ ದೊರೆಯಲಿ ಶ್ರೀಯುತರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ಹಾಗೂ ಅಭಿಮಾನಿ ವರ್ಗಕ್ಕೆ ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

*********

ಡಿ ಪಿ ಎಂ